

# ಸುದ್ದಿ-ಸಂಚಾರಿ

ಇದು ನಮ್ಮೂರ ಸುದ್ದಿ ವಾಹಿನಿ

**ಉಚ್ಚಾಟನೆ**

ಆರು ವರ್ಷಗಳ ಕಾಲ ಬಿಜೆಪಿಯಿಂದ ಕೆಎಸ್ ಈಶ್ವರಪ್ಪ ಉಚ್ಚಾಟನೆ

ಮಂಗಳವಾರ,23ನೇ ಏಪ್ರಿಲ್,2024 | ● ಸಂಪುಟ-1 | ● ಸಂಚಿಕೆ-62 | ● ಉಚಿತ | ● | ● www.suddisanchaari.in



**ಬೈಂದೂರಿನಲ್ಲಿ ನಡೆದ ಮಂಡಲ ಮಹಿಳಾ ಸಮಾವೇಶದಲ್ಲಿ ಬಿಜೆಪಿ ಅಭ್ಯರ್ಥಿ ಬಿ.ವೈ.ರಾಘವೇಂದ್ರ ಹೇಳಿಕೆ**

## ಮಹಿಳೆಯರಿಗೆ ಮೀಸಲಾತಿ ಕೊಟ್ಟಿದ್ದು ಮೋದಿ ಮತ್ತು ಯಡಿಯೂರಪ್ಪ

ಸುದ್ದಿ ಸಂಚಾರಿ

ಬೈಂದೂರು : ಲೋಕಸಭೆ ಹಾಗೂ ವಿಧಾನ ಸಭೆಯಲ್ಲಿ ಮಹಿಳೆಯರಿಗೆ ಮೀಸಲಾತಿ ಕೊಟ್ಟಿದ್ದು, ಪ್ರಧಾನಿ ನರೇಂದ್ರ ಮೋದಿ ಜಿ.ಪಂ-ತಾ.ಪಂ ಹಾಗೂ ಗ್ರಾಪಂಗಳಲ್ಲಿ ಮೀಸಲಾತಿ ಕೊಟ್ಟಿದ್ದು, ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಎಂದು ಬಿಜೆಪಿ ಅಭ್ಯರ್ಥಿ ಬಿ.ವೈ.ರಾಘವೇಂದ್ರ ಹೇಳಿದರು.

ಪಟ್ಟಣದಲ್ಲಿ ನಡೆದ ಮಂಡಲ ಮಹಿಳಾ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಲೋಕಸಭೆ ಹಾಗೂ ವಿಧಾನ ಸಭೆಯಲ್ಲಿ ಶೇ.೩೩ರಷ್ಟು ಸ್ಥಾನವನ್ನು ಮಹಿಳೆಯರಿಗೆ ನೀಡುವ ಮೂಲಕ ಮಹಿಳಾ ಸಮುದಾಯಕ್ಕೆ ಆದ್ಯತೆಯನ್ನು ನೀಡಿದವರು ನಮ್ಮ ನೆಚ್ಚಿನ ಪ್ರಧಾನಿ ನರೇಂದ್ರ ಮೋದಿಯವರು ಎಂದ ಅವರು, ರಾಜ್ಯದಲ್ಲಿ ಜಿ.ಪಂ-ತಾಪಂ ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಶೇ. 50ರಷ್ಟು ಮೀಸಲಾತಿಯನ್ನು ಮಹಿಳೆಯರಿಗೆ ಕೊಡುವ ಮೂಲಕ ಯಡಿಯೂರಪ್ಪನವರು ತಾವು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಮಹಿಳಾ ಸಮುದಾಯಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡಿದೆ ಎಂದರು.

ರಾಜ್ಯ ಸರ್ಕಾರ ಮಹಿಳಾ ವಿರೋಧಿ ನೀತಿಯನ್ನು ಅನುಸರಿಸುತ್ತಿದೆ. ಇಂತಹ ಸರ್ಕಾರ ಅಧಿಕಾರದಲ್ಲಿ ಇರಬೇಕಾ ಎಂಬುದನ್ನು ನಮ್ಮ ಮತದಾರರು ಯೋಚಿಸಬೇಕಾಗಿದೆ. 10 ಕೆಜಿ ಅಕ್ಕಿ ಕೊಡುತ್ತೇವೆ ಎಂದು ಹೇಳಿದ ಸಿದ್ದರಾಮಯ್ಯನವರು ಇಂದು ಕೇವಲ 5 ಕೆಜಿ ಅಕ್ಕಿ ಕೊಡುತ್ತಿದ್ದಾರೆ. ಈ ಅಕ್ಕಿಯೂ ಸಹ ಪ್ರಧಾನಿ ನರೇಂದ್ರ ಮೋದಿಯವರು ನೀಡುತ್ತಿರುವ ಅಕ್ಕಿಯಾಗಿದೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷ ಸುಳ್ಳು ಹೇಳಿಕೊಂಡು ರಾಜಕಾರಣ ಮಾಡುತ್ತಿದೆ. ದೇಶದ ಪ್ರತಿಯೊಬ್ಬ ಹೆಣ್ಣು ಮಗಳಿಗೂ ಪ್ರತಿವರ್ಷ 1ಲಕ್ಷ ನೀಡುತ್ತೇವೆ ಎಂದು ಹೇಳಿದ್ದಾರೆ. ನಮ್ಮ ದೇಶದಲ್ಲಿ 60 ಲಕ್ಷ ಮಹಿಳೆಯರಿದ್ದಾರೆ. ಅವರೆಲ್ಲರಿಗೂ 1ಲಕ್ಷ ಹಣ ನೀಡಿದರೆ ಪ್ರತಿ ವರ್ಷ 60 ಲಕ್ಷ ಕೋಟಿ ಹಣ ಬೇಕಾಗುತ್ತದೆ. ಹಾಗಾದರೆ ನಮ್ಮ ದೇಶದ ಬಜೆಟ್ ಇರುವುದೇ 45 ಲಕ್ಷ ಕೋಟಿ ಕುಟುಂಬದ ಓರ್ವ ಹೆಣ್ಣು ಮಗಳಿಗೆ 1 ಲಕ್ಷ ನೀಡಿದರೂ ಸಹ 32 ಲಕ್ಷ ಕೋಟಿ ಹಣ ಬೇಕಾಗುತ್ತದೆ. ಯಾವುದೇ ಅಂಕಿ ಸಂಕಿಯಿಲ್ಲದೇ ಕೆಲವರು ಬೊಗಳೆ ಬಿಡುತ್ತಾ ಅಧಿಕಾರವನ್ನು ಹಿಡಿಯುವ ಸಲುವಾಗಿ ಮತದಾರರಿಗೆ ಸಲ್ಲದ ಆಮಿಷಗಳನ್ನು ಒಡ್ಡುತ್ತಿದೆ ಎಂದು ದೂರಿದರು.

ಮೋದಿ ಸರ್ಕಾರ ಸ್ವಚ್ಛ ಭಾರತ್ ಹೆಸರಿನಲ್ಲಿ ಪ್ರತಿಮನೆಗೆ ಶೌಚಾಲಯ ಜಲಜೀವನ್ ಮಿಷನ್ ಅಡಿಯಲ್ಲಿ ಪ್ರತಿ ಮನೆಗೆ ಕುಡಿಯುವ ನೀರು ಎಲ್.ಪಿ.ಜಿ. ಸಂಪರ್ಕ ಬಡವರಿಗೆ ಮನೆ, ಏಪಿಎಲ್ ಹಾಗೂ ಬಿಪಿಎಲ್ ಕಾರ್ಡ್‌ದಾರರಿಗೆ ಆಯುಷ್ಮಾನ್ ಕಾರ್ಡ್ ಯೋಜನೆ ನೀಡುವ ಮೂಲಕ ಬಡವರು ಮಧ್ಯಮ ವರ್ಗದವರು ನೆಮ್ಮದಿಯಿಂದ ಜೀವನ ನಡೆಸುವಂತೆ ಮಾಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಶಾಸಕಿ ಭಾರತಿ ಶೆಟ್ಟಿ, ಡಾ. ರಾಜನಂದಿನಿ, ಗಾಯತ್ರಿ ಮಲ್ಲಪ್ಪ, ಭಾಗೀರಥಿ ಇನ್ನೂ ಮುಂತಾದವರು ಉಪಸ್ಥಿತರಿದ್ದರು.

### ಚಿತ್ರನಟಿ ಹಾಗೂ ಬಿಜೆಪಿ ನಾಯಕಿ ಶ್ರುತಿ



ಓಟಿಗಾಗಿ ಬಿಟ್ಟಿ ಭಾಗ್ಯ ನೀಡುತ್ತಿರುವ ರಾಜ್ಯ ಸರ್ಕಾರ ಜನ ಸಾಮಾನ್ಯರನ್ನು ವಂಚಿಸುತ್ತಿದೆ. ಬುಡಕಟ್ಟು ಸಮುದಾಯದಿಂದ ಬಂದಂತಹ ಮಹಿಳೆಯನ್ನು ರಾಷ್ಟ್ರಪತಿಯನ್ನಾಗಿ ಮಾಡಿದ ಹೆಮ್ಮೆ ಬಿಜೆಪಿಯದ್ದು, ಇಂತಹ ಮಹಿಳೆಯ ಬಗ್ಗೆ ಹಾಗೂ ನಮ್ಮ ಪ್ರಧಾನ ಮಂತ್ರಿ ಮೋದಿಯ ಬಗ್ಗೆ ಸಿದ್ದರಾಮಯ್ಯನವರು ಹಗುರವಾಗಿ ಮಾತನಾಡುತ್ತಾರೆ. ಅದೇ ರೀತಿ ಅವರ ಪಕ್ಷದ ಸೋನಿಯಾ ಗಾಂಧಿ ಬಗ್ಗೆ ಹಾಗೂ ರಾಹುಲ್ ಗಾಂಧಿ ಬಗ್ಗೆ ಮಾತನಾಡುತ್ತಾರೆಯೇ? ದೇಶದ ಹಿತಕ್ಕಾಗಿ ಮೋದಿ ಮತ್ತೊಮ್ಮೆ ಪ್ರಧಾನಿಯಾಗಬೇಕಾಗಿದೆ.

### ಗುರುರಾಜ್ ಗಂಟಿಹೊಳಿ, ಬೈಂದೂರು ಶಾಸಕ



ಬೈಂದೂರಿನ ಸಮಗ್ರ ಅಭಿವೃದ್ದಿಯಾಗಬೇಕಾದರೆ ಹಾಗೂ ಬೈಂದೂರು ಕ್ಷೇತ್ರ ಒಂದು ಮಾದರಿ ಕ್ಷೇತ್ರವಾಗಬೇಕಾದರೆ ರಾಘಣ್ಣ ಮತ್ತೊಮ್ಮೆ ಸಂಸದರಾಗಲೇಬೇಕು. ಈ ಕ್ಷೇತ್ರ ಜನತೆಗೆ ವರಾಹಿಯಿಂದ ಸಿಹಿ ನೀರನ್ನು ಕುಡಿಸುವ ಯೋಜನೆ ಜಾರಿಗಾಗಿ ರಾಘಣ್ಣ ಇನ್ನೊಮ್ಮೆ ಸಂಸತ್ತಿಗೆ ಆಯ್ಕೆಯಾಗಲೇಬೇಕಿದೆ. ಕ್ಷೇತ್ರದ ಮತದಾರರು 1ಲಕ್ಷಕ್ಕೂ ಅಂತರದ ಮತವನ್ನು ರಾಘಣ್ಣರಿಗೆ ನೀಡಲಿದ್ದಾರೆ.






# ಶಿಕಾರಿಪುರ : ಕುಮದ್ವತಿ ಕೇಂದ್ರಿಯ ವಸತಿ ಶಿಕ್ಷಣ ಸಂಸ್ಥೆಯಲ್ಲಿ ಪ್ರವೇಶ ಪ್ರಾರಂಭ



**ಸೊರಬ** ಶ್ರೀಮತಿ ಶಕುಂತಲಮ್ಮ ಬಂಗಾರಪ್ಪ ಅವರ ಪುಣ್ಯ ಸ್ಮರಣೆ ಪ್ರಯುಕ್ತ ಸಚಿವ ಮಧು ಬಂಗಾರಪ್ಪ ದಂಪತಿ ಸಹಿತ ಪೂಜೆ ಸಲ್ಲಿಸಿದರು.

## ಮತದಾನ: ಪಾರದರ್ಶಕತೆಗೆ ಒತ್ತು'

ಸುದ್ದಿ-ಸಂಚಾರಿ | ಶಿವಮೊಗ್ಗ

'ಮನೆಯಿಂದ ಮತದಾನ ಮಾಡಿದರೂ ಮತ ಹಾಕುವವರಿಗೆ ಸಂಪೂರ್ಣ ಗೌಪ್ಯತೆ ಕಾಪಾಡಿಕೊಳ್ಳಲು ಅವಕಾಶ ಮಾಡಿಕೊಡಲಾಗುತ್ತದೆ. ಈ ಮತದಾನ ಪ್ರಕ್ರಿಯೆಗೆ ಪ್ರತಿ ತಾಲ್ಲೂಕಿಗೆ 15ರಿಂದ 16 ತಂಡಗಳನ್ನು ನಿಯೋಜಿಸಲಾಗಿದೆ' ಎಂದು ಶಿವಮೊಗ್ಗ ನಗರ ಯೋಜನಾ ಶಾಖೆಯ ನಿರ್ದೇಶಕರೂ ಆದ ಚುನಾವಣಾಧಿಕಾರಿ ನರಸಿಂಹಮೂರ್ತಿ ಹೇಳಿದರು.

'ಮತ ಹಾಕುವ ಸಂದರ್ಭ ಬಿಟ್ಟು ಉಳಿದ ಪ್ರಕ್ರಿಯೆಯನ್ನು ಸಂಪೂರ್ಣ ವಿಡಿಯೊ ಚಿತ್ರೀಕರಣ ಮಾಡಲಾಗುತ್ತದೆ. ಮತ ಹಾಕುವವರ ಮೇಲೂ ಯಾವುದೇ ಪ್ರಭಾವ ಬೀರದಂತೆ ಕ್ರಮ ವಹಿಸಲಾಗುವುದು' ಎಂದು ತಿಳಿಸಿದರು.

**Top News** **ಲೋಕಸಭೆ ಕ್ಷೇತ್ರದ ವ್ಯಾಪ್ತಿಯಲ್ಲಿ 85 ವರ್ಷ ಮೇಲ್ಪಟ್ಟ ಒಟ್ಟು 15,330 ಮತದಾರರು**

# 25ರಿಂದ ಮನೆಯಿಂದ ಮತದಾನ ಪ್ರಕ್ರಿಯೆ

ಸುದ್ದಿ ಸಂಚಾರಿ

ಶಿವಮೊಗ್ಗ: ಲೋಕಸಭಾ ಚುನಾವಣೆ ಮೇ 7ರಂದು ನಡೆಯಲಿದೆ. ಅದಕ್ಕೆ ಮುನ್ನವೇ ಹಿರಿಯರು ಹಾಗೂ ಅಂಗವಿಕಲರಿಗೆ ಮನೆಯಿಂದಲೇ ಮತದಾನ ಮಾಡಲು ಅವಕಾಶ ನೀಡಲಾಗುತ್ತಿದೆ.

85 ವರ್ಷ ಮೇಲ್ಪಟ್ಟ ಮತದಾರರು ಹಾಗೂ ಶೇ 40ಕ್ಕಿಂತ ಹೆಚ್ಚಿನ ಅಂಗವಿಕಲತೆ ಇರುವವರು ಈ ಮತದಾನ ಪ್ರಕ್ರಿಯೆಗೆ ಅರ್ಹರಾಗಿದ್ದಾರೆ. ಇವರ ಮಾಹಿತಿಯನ್ನು ಸಂಗ್ರಹಿಸಿ 'ಎಲೆಕ್ಟಾನ್' ತಂತ್ರಾಂಶದಲ್ಲಿ ದಾಖಲಿಸಿ, ಅವರಿಗೆ ಮನೆಯಲ್ಲೇ ಮತದಾನ ಮಾಡುವುದಕ್ಕೆ ಶನಿವಾರದಿಂದ ಅವಕಾಶ ಕೊಡಲಾಗಿದೆ. ಏ.25 ರಿಂದ 30ರವರೆಗೆ ಮತದಾನ ಪ್ರಕ್ರಿಯೆ ನಡೆಯಲಿದೆ.ಮತದಾನದ ಆಯ್ಕೆ ಐಚ್ಛಿಕವಾಗಿದ್ದು, ಮತದಾರರು ಒಪ್ಪಿಗೆ ಪತ್ರ ಕೊಟ್ಟಲ್ಲಿ ಮಾತ್ರ ಅವಕಾಶ ಮಾಡಿಕೊಡಲಾಗುತ್ತದೆ. ಶಿವಮೊಗ್ಗ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 85 ವರ್ಷ ಮೇಲ್ಪಟ್ಟ ಒಟ್ಟು 15,330 ಮತದಾರರು ಇದ್ದು, ಅವರಲ್ಲಿ 2,515 ಮಂದಿ ಮನೆಯಿಂದಲೇ ಮತದಾನ ಮಾಡಲು ಒಪ್ಪಿಗೆ ಪತ್ರ ಕೊಟ್ಟಿದ್ದಾರೆ.ಶೇ 40ಕ್ಕಿಂತ ಹೆಚ್ಚು ಅಂಗವಿಕಲತೆ ಇರುವ 15,802 ಮತದಾರರ ಪೈಕಿ 534 ಮಂದಿ ಮನೆಯಿಂದಲೇ ಮತ ಹಾಕುವುದಾಗಿ ಒಪ್ಪಿಕೊಂಡಿದ್ದಾರೆ. ಉಳಿದವರು ಮತದಾನ ಕೇಂದ್ರಕ್ಕೆ ಬರುವುದಾಗಿ ಹೇಳಿದ್ದಾರೆ.ಶಿವಮೊಗ್ಗ ಗ್ರಾಮಾಂತರ ಕ್ಷೇತ್ರದ ವ್ಯಾಪ್ತಿಯಲ್ಲಿ 1,329, ಭದ್ರಾವತಿ 1,475, ಶಿವಮೊಗ್ಗ 2,416, ತೀರ್ಥಹಳ್ಳಿ 1,658, ಶಿಕಾರಿಪುರ 1,487 ಸೊರಬ 1,676, ಸಾಗರ 2,318 ಹಾಗೂ ಬೈಂದೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 2,969 ಮಂದಿ 85 ವರ್ಷ ಮೇಲ್ಪಟ್ಟ ಮತದಾರರು ಇದ್ದಾರೆ. ಶೇ 40ಕ್ಕಿಂತ ಹೆಚ್ಚಿನ ಅಂಗವೈಕಲ್ಯ ಇರುವ ಮತದಾರರು ಶಿವಮೊಗ್ಗ ಗ್ರಾಮಾಂತರದಲ್ಲಿ 2,799, ಭದ್ರಾವತಿ 2,381, ಶಿವಮೊಗ್ಗ 1,466, ತೀರ್ಥಹಳ್ಳಿ 1,743, ಶಿಕಾರಿಪುರ 3,001, ಸೊರಬ 2,756, ಸಾಗರ 1,963 ಹಾಗೂ ಬೈಂದೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 3,156 ಮಂದಿ ಇದ್ದಾರೆ.

# ಬಿಜೆಪಿ ಕಚ್ಚಾಟದಿಂದ ಕಾಂಗ್ರೆಸ್‌ಗೆ ಲಾಭ: ಶಾಸಕ ಬೇಳೂರು

ಸುದ್ದಿ ಸಂಚಾರಿ | ತುಮರಿ

ಸಾಗರ: 'ರಾಜ್ಯದ ಬಹುತೇಕ ಕ್ಷೇತ್ರಗಳಲ್ಲಿ ಬಿಜೆಪಿಯಲ್ಲಿ ಆಂತರಿಕ ಕಚ್ಚಾಟ ಹೆಚ್ಚಾಗಿದ್ದು, ಲೋಕಸಭೆ ಚುನಾವಣೆಯಲ್ಲಿ ಇದರ ಲಾಭ ಕಾಂಗ್ರೆಸ್ ಪಕ್ಷಕ್ಕೆ ದೊರೆಯಲಿದೆ' ಎಂದು ಶಾಸಕ ಗೋಪಾಲಕೃಷ್ಣ ಬೇಳೂರು ವಿಶ್ವಾಸ ವ್ಯಕ್ತಪಡಿಸಿದರು.

ಇಲ್ಲಿನ ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ಈಚೆಗೆ ನಡೆದ ಗ್ಯಾರಂಟಿ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

'ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿಯಲ್ಲಿರುವ ಯಡಿಯೂರಪ್ಪ ಕುಟುಂಬದ ವಿರೋಧಿಗಳೇ ಆ ಪಕ್ಷದ ಅಭ್ಯರ್ಥಿಯನ್ನು ಸೋಲಿಸಲಿದ್ದಾರೆ' ಎಂದರು.

'ಪಕ್ಷೇತರ ಅಭ್ಯರ್ಥಿಯಾಗಿ ಕೆ.ಎಸ್.ಈಶ್ವರಪ್ಪ ಸ್ಪರ್ಧಿಸಿರುವುದು ಕಾಂಗ್ರೆಸ್‌ಗೆ ಅನುಕೂಲಕರ ವಾತಾವರಣ ಸೃಷ್ಟಿಸಿದೆ. ಬಿಜೆಪಿಯ ಕೆಡಕು, ದೌರ್ಬಲ್ಯಗಳನ್ನು ಈಶ್ವರಪ್ಪ ಅವರೇ ಜನರ ಎದುರು ಎಳೆ ಎಳೆಯಾಗಿ ಬಿಚ್ಚಿಡುತ್ತಿದ್ದಾರೆ. ಜೊತೆಗೆ ಕಾಂಗ್ರೆಸ್ ಪರವಾದ ವಾತಾವರಣ ಇರುವುದು ಗೀತಾ ಶಿವರಾಜಕುಮಾರ್ ಗೆಲುವಿಗೆ ಕಾರಣವಾಗಲಿದೆ' ಎಂದು ಹೇಳಿದರು.

'ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಬಡ ಹಾಗೂ ಮಧ್ಯಮ ವರ್ಗದವರ ಬಗ್ಗೆ ಇರುವ ಕಾಳಜಿಯನ್ನು ಕಾಂಗ್ರೆಸ್ ಪಕ್ಷ ವ್ಯಕ್ತಪಡಿಸಿದೆ. ಇದು ಕಾಂಗ್ರೆಸ್‌ಗೆ ಇರುವ ಬದ್ಧತೆ. ಆರಂಭದಲ್ಲಿ ಈ ಯೋಜನೆಯನ್ನು ಬಿಟ್ಟಿ ಭಾಗ್ಯ ಎಂದು ಟೀಕಿಸಿದ ಬಿಜೆಪಿ ಈಗ ಮೋದಿ ಗ್ಯಾರಂಟಿ ಹೆಸರಿನಲ್ಲಿ ಜನರನ್ನು ಮರಳು ಮಾಡಲು ಮುಂದಾಗಿದೆ' ಎಂದು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಆರ್. ಜಯಂತ್ ಟೀಕಿಸಿದರು.

ಪ್ರಮುಖರಾದ ಪ್ರಫುಲ್ಲಾ ಮಧುಕರ್, ಕಲಸೆ ಚಂದ್ರಪ್ಪ, ಅನಿತಾಕುಮಾರಿ, ಮಕ್ಬುಲ್ ಅಹ್ಮದ್, ಎಚ್.ಎಂ.ರವಿಕುಮಾರ್, ಗಣಪತಿ ಮಂಡಗಳಲೆ, ವಿ.ಶಂಕರ್, ಮೈಕಲ್ ಡಿಸೋಜ, ಎನ್. ಉಷಾ, ನಂದಾ ಗೊಜನೂರು ಇದ್ದರು.

## ಸಾಗರ




ಸಾಗರದಲ್ಲಿ ಈಚೆಗೆ ನಡೆದ 'ಗ್ಯಾರಂಟಿ ಹಬ್ಬ' ಕಾರ್ಯಕ್ರಮದಲ್ಲಿ ಶಾಸಕ ಗೋಪಾಲಕೃಷ್ಣ ಬೇಳೂರು ಮಾತನಾಡಿದರು

ಸುದ್ದಿ ಸಂಚಾರಿ

ಸುದ್ದಿ ಮತ್ತು ಜಾಹಿರಾತುಗಳಿಗಾಗಿ ಸಂಪರ್ಕಿಸಿ



# ಸುದ್ದಿ-ಸಂಚಾರಿ

ಇದು ನಮ್ಮೂರ ಸುದ್ದಿ ವಾಹಿನಿ

**ಚನ್ನಬಸಪ್ಪ**

'ಯಡಿಯೂರಪ್ಪ ಅವರ ಜೊತೆಯಲ್ಲಿ ಬೆಳೆದ ವ್ಯಕ್ತಿ ಇವತ್ತು ಅವರ ಬಗ್ಗೆ ಬಹಳ ಹಗುರವಾಗಿ ಮಾತಾಡುತ್ತಾನೆ. ಆತನ ಮಾತು ಕೇಳಿದರೇ ಮೈ ಉರಿಯುತ್ತದೆ.

ಮಂಗಳವಾರ,23ನೇ ಏಪ್ರಿಲ್,2024 | ● ಸಂಪುಟ-1 | ● ಸಂಚಿಕೆ-62 | ● ಉಚಿತ | ● | ● www.suddisanchaari.in



Top News **ಸೊರಬ**

## ಬಂಗಾರಪ್ಪ ನಿಕಟವರ್ತಿ ವಿ.ಜಿ. ಪರಶುರಾಮ್ ಬಿಳವಗೋಡು ಬಿಜೆಪಿಗೆ

ಸುದ್ದಿ ಸಂಚಾರಿ

ಸೊರಬ: ಕೇಂದ್ರದ ನರೇಂದ್ರ ಮೋದಿ ನೇತೃತ್ವದ ಜನಪರ ಸರ್ಕಾರ ಹಾಗೂ ಜಿಲ್ಲೆಯಲ್ಲಿ ಸಂಸದ ಬಿ.ವೈ.ರಾಘವೇಂದ್ರ ಅವರ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಬಿಜೆಪಿ ಸೇರ್ಪಡೆಯಾಗಿದ್ದೇನೆ ಎಂದು ಸಮಾಜವಾದಿ ಪಕ್ಷದ ಸೊರಬ ವಿಧಾನಸಭಾ ಕ್ಷೇತ್ರದ ಪರಾಜಿತ ಅಭ್ಯರ್ಥಿ ವಿ.ಜಿ.ಪರಶುರಾಮ ಬಿಳವಗೋಡು ತಿಳಿಸಿದರು. ಶಿವಮೊಗ್ಗದಲ್ಲಿ ನಡೆದ ಬಿಜೆಪಿ ಅಭ್ಯರ್ಥಿ ಬಿ.ವೈ.ರಾಘವೇಂದ್ರ ಅವರ ನಾಮಪತ್ರ ಸಲ್ಲಿಕೆ ಕಾರ್ಯಕ್ರಮದಲ್ಲಿ ಬಿಜೆಪಿಯನ್ನು ಸೇರ್ಪಡೆ ಯಾಗಿದ್ದೇನೆ. ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಅವರ ಕೊಡುಗೆಯೂ ರಾಜ್ಯ ಮತ್ತು ಕ್ಷೇತ್ರಕ್ಕೆ ಸಾಕಷ್ಟಿದೆ ಎಂದು ಹೇಳಿಕೆ ನೀಡಿದ್ದಾರೆ. ಈಗಾಗಲೇ ಮೂರು ಬಾರಿ ಸಂಸದರಾಗಿರುವ ಬಿ.ವೈ.ರಾಘವೇಂದ್ರ ಅವರು ಮರು ಆಯ್ಕೆಯಾಗಬೇಕು. ಪಕ್ಷದ ಗೆಲುವಿಗೆ ಸಂಘಟನಾತ್ಮಕವಾಗಿ ಕಾರ್ಯನಿರ್ವಹಿಸುತ್ತೇನೆ. ಸೊರಬ ಕ್ಷೇತ್ರಕ್ಕೂ ನೀರಾವರಿ, ರಸ್ತೆ ಸೇರಿ ಮೂಲ ಸೌಕರ್ಯ ಕಲ್ಪಿಸುವಲ್ಲಿ ಸಂಸದರ ಕೊಡುಗೆ ಇದೆ ಎಂದಿದ್ದಾರೆ.ಸೊರಬ ತಾಲೂಕಿನವರಾದ ವಿ.ಜಿ. ಪರಶುರಾಮ್ ಮಾಜಿ ಮುಖ್ಯಮಂತ್ರಿ ದಿ. ಬಂಗಾರಪ್ಪರವರ ನಿಕಟವರ್ತಿಗಳಾಗಿದ್ದರು. ಎಲ್'ಡಿಎಂಆರ್'ಸಿ ರಾಜ್ಯ ಸಂಯೋಜಕರಾಗಿ ಸೌತ್ ಗೋವಾ 2019ರ ಲೋಕಸಭಾ ಮತ್ತು ಪಂಜಿಮ್ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಯಶಸ್ವಿಯಾಗಿ ಕಾರ್ಯನಿರ್ವಹಿಸಿದ್ದಾರೆ.ಇವರ ಸಾಧನೆಯನ್ನು ಗುರುತಿಸಿ ಅಮೇಥಿ ಲೋಕಸಭಾ ಚುನಾವಣೆ, ಮಹಾರಾಷ್ಟ್ರದ ಕೊಂಕಣ ವಿಭಾಗ ಮತ್ತು 2020ರ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯಸಂಯೋಜಕರಾಗಿ ಕಾರ್ಯನಿರ್ವಹಿಸಿದ್ದಾರೆ.ಹಿಂದೆ ಕಾಂಗ್ರೆಸ್'ನಲ್ಲೂ ಪ್ರಮುಖ ಪಾತ್ರ ಇನ್ನು, ಹಿಂದಿನ ವಿಧಾನಸಭೆ ಮತ್ತು ಲೋಕಸಭಾ ಚುನಾವಣೆಗಳಲ್ಲಿನ ಯಶಸ್ವಿ ಕಾರ್ಯವೈಖರಿಯನ್ನು ಮೆಚ್ಚಿ ವಿ.ಜಿ. ಪರಶುರಾಮ್ ಅವರಿಗೆ ತೆಲಂಗಾಣ ಮತ್ತು ಲಕ್ಷ ದ್ವೀಪ ರಾಜ್ಯಗಳ ಎಐಸಿಸಿ ಎಲ್'ಡಿಎಂಆರ್'ಸಿ ಸಂಯೋಜಕರಾಗಿ ನೇಮಕ ಮಾಡಲಾಗಿತ್ತು. ಬಿಜೆಪಿಗೆ ಸೇರ್ಪಡೆಗೊಂಡಿದ್ದು ಶಿವಮೊಗ್ಗ ಜಿಲ್ಲೆಯಾದ್ಯಂತ ಹೆಚ್ಚಿನ ಅಭಿವೃದ್ಧಿಗೆ ಸಾಕ್ಷಿಯಾಗಲಿದೆ.


**ಆಧಾರ್ ಕಾರ್ಡ್ ತಿದ್ದುಪಡಿ ಮಾಡಲಾಗುವುದು**

1.ಮೊಬೈಲ್ ನಂಬರ್.
2.ವಿಳಾಸ ಬದಲಾವಣೆ
3.ತಂದೆ/ಪತಿಯ ಹೆಸರು ತಿದ್ದುಪಡಿ ಮಾಡಲಾಗುವುದು

ಬಸ್ ನಿಲ್ದಾಣ, ಶಿರಾಳಕೊಪ್ಪ

